ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೭**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಇಪ್ಪತ್ತೊಂಬತ್ತನೇ ಅಧಿವೇಶನ**

**ಮಂಗಳವಾರ, ದಿನಾಂಕ: ೭ನೇ ಜುಲೈ, ೨೦೧೫**

---

**ಸಮೂಹ – II**

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ಹಣ್ಣುಗಳನ್ನು ಹಣ್ಣಾಗಿಸಲು ರಾಸಾಯನಿಕಗಳನ್ನು ಬಳಕೆ ಮಾಡುತ್ತಿರುವ ಬಗ್ಗೆ

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು)–**

೯೧ (೮೦೪) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಮಾವು ಸೇರಿದಂತೆ ಇತರೆ ಹಣ್ಣುಗಳನ್ನು ಬೇಗ ಹಣ್ಣಾಗಿಸಲು ಕ್ಯಾಲ್ಸಿಯಂ ಕಾರ್ಬೈಟ್ ರಸಾಯನಿಕಗಳನ್ನು ಬಳಸುವ ತಂತ್ರಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದಕ್ಕೆ ಕಾರಣಗಳೇನು ; ಇದನ್ನು ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ಹಿಂದೆ ಇದ್ದಂತಹ ಬಾಳೆ ಹಣ್ಣಿಗೆ ಸಾಂಪ್ರದಾಯಿಕ ಹುಬ್ಬೆ ಹಾಕುವ ಪದ್ಧತಿಯನ್ನು ರೈತರು ಸೇರಿದಂತೆ ವ್ಯಾಪಾರಸ್ಥರು ಕೈಬಿಟ್ಟಿರುವುದು ನಿಜವೇ;

(ಈ) ವಿಶೇಷವಾಗಿ ಮಾವು ಹಣ್ಣಾಗಿಸಲು ಕ್ಯಾಲ್ಸಿಯಂ ಕಾರ್ಬೈಡ್ ಬಳಕೆಯ ಪ್ರಮಾಣವು ಎಲ್ಲೆಡೆ ಕಂಡು ಬಂದಿದೆ ; ಇದಕ್ಕೆ ಕಡಿವಾಣ ಹಾಕಲು ಸರ್ಕಾರ ಮುಂದಾಗುವುದೇ ?

## ವಿಧಾನಸೌಧ – ವಿಕಾಸಸೌಧದ ನಡುವಿನ ಅಂಡರ್‌ಪಾಸ್ ಸೋರುತ್ತಿರುವ ಬಗ್ಗೆ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) –**

೯೨ (೮೩೯) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿಧಾನ ಸೌಧ ಮತ್ತು ವಿಕಾಸ ಸೌಧ ನಡುವೆ ಅಂಡರ್‌ಪಾಸ್ (ಸುರಂಗ ಮಾರ್ಗ) ನಿರ್ಮಾಣವಾಗಿರುವುದು ಯಾವಾಗ ; ಇದಕ್ಕೆ ತಗುಲಿರುವ ವೆಚ್ಚ ಎಷ್ಟು ;

(ಆ) ಈ ಅಂಡರ್ ಪಾಸ್ ನಿರ್ಮಾಣವಾದ ನಂತರ ಇಲ್ಲಿಯವರೆಗೆ ಇದರ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ; ನಿರ್ವಹಣಾ ವೆಚ್ಚವೆಷ್ಟು ;

(ಇ) ಕಳಪೆ ಕಾಮಗಾರಿಯಿಂದಾಗಿ ಮಳೆಗಾಲದಲ್ಲಿ ಸೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸಂಬಂಧಿಸಿದವರ ಮೇಲೆ ಕೈಗೊಂಡ ಕ್ರಮಗಳೇನು ?

## ಸರ್ಕಾರಿ ಕಟ್ಟಡಗಳ ನಿರ್ವಹಣೆ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೯೩ (೮೨೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ರಾಜ್ಯ ಸರ್ಕಾರದ ಯಾವ ಯಾವ ಇಲಾಖೆಗಳ ಸರ್ಕಾರಿ ಕಟ್ಟಡಗಳು ಹಾಗೂ ವಸತಿ ಗೃಹಗಳು ನಿರ್ಮಾಣ ಮತ್ತು ನಿರ್ವಹಣೆಯನ್ನು ಲೋಕೋಪಯೋಗಿ ಇಲಾಖೆಯಿಂದ ನಿರ್ವಹಿಸಲಾಗುತ್ತಿದೆ;

(ಆ) ೨೦೧೫–೧೬ನೇ ಸಾಲಿನಲ್ಲಿ ಮೇಲ್ಕಂಡ ಇಲಾಖೆಗಳ ಕಟ್ಟಡಗಳ ನಿರ್ವಹಣೆಗಾಗಿ ಬಿಡುಗಡೆಯಾದ ಅನುದಾನವೆಷ್ಟು ;

(ಇ) ಮೂಡಿಗೆರೆ, ಕೊಪ್ಪ ಮತ್ತು ಶೃಂಗೇರಿಯಲ್ಲಿರುವ ಸರ್ಕಾರಿ ಕಟ್ಟಡಗಳ ನಿರ್ವಹಣೆಗಾಗಿ ಅನುದಾನ ಬಿಡುಗಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಬೀಜ ಸಂಶೋಧನಾ ಕೇಂದ್ರದ ಸ್ಥಾಪನೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೯೪ (೮೮೩) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹಾವೇರಿ ಜಿಲ್ಲೆ, ರಟ್ಟೀಹಳ್ಳಿಯಲ್ಲಿ ಬೀಜ ಸಂಶೋಧನಾ ಕೇಂದ್ರ ಸ್ಥಾಪಿಸಲು ಹೊರಟಿರುವುದು ನಿಜವೆ ; ಸದರಿ ಕೇಂದ್ರಕ್ಕಾಗಿ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೇ ; ಯಾವಾಗ ಮತ್ತು ಎಷ್ಟು ಎಕರೆ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ ;

(ಆ) ಭೂಮಿಯನ್ನು ವಶಪಡಿಸಿಕೊಂಡ ನಂತರ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ತೆಗೆದುಕೊಂಡ ಕ್ರಮಗಳೇನು ;

(ಇ) ಸದರಿ ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ವಿಫಲವಾಗಿದೆಯೇ; ಇಷ್ಟೊಂದು ವಿಳಂಬವಾಗಲು ಕಾರಣವೇನು ;

(ಈ) ಸದರಿ ಭೂಮಿ ಕಳೆದುಕೊಂಡ ರೈತರು ಭೂಮಿಯನ್ನು ಹಿಂತಿರುಗಿಸಲು ಕೋರಿರುತ್ತಾರೆಯೇ ; ಈ ಕೋರಿಕೆಗೆ ಸರ್ಕಾರದ ನಿಲುವೇನು ?

## ಮಡಿಕೇರಿ ನಗರ ಖಾಸಗಿ ಬಸ್ ನಿಲ್ದಾಣದ ಬಗ್ಗೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೫ (೮೧೧) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರದ ಖಾಸಗಿ ಬಸ್‌ನಿಲ್ದಾಣ ಸ್ಥಳಾಂತರಿಸುವ ಪ್ರಕ್ರಿಯೆ ವಿಳಂಬವಾಗಲು ಕಾರಣಗಳೇನು ;

(ಆ) ಸದರಿ ಬಸ್‌ನಿಲ್ದಾಣದ ನಿರ್ಮಾಣಕ್ಕೆ ತಗಲುವ ಅಂದಾಜು ವೆಚ್ಚದ ಪಟ್ಟಿಯನ್ನು (DPR) ಸರ್ಕಾರಕ್ಕೆ ಸಲ್ಲಿಸಲಾಗಿದೆಯೇ ;

(ಇ) ಸದರಿ ಪ್ರಸ್ತಾವನೆಗೆ ಸರ್ಕಾರದಿಂದ ಆಡಳಿತಾತ್ಮಕ ಅನುಮೋದನೆ ದೊರೆತಿದೆಯೇ; ಇಲ್ಲವಾದಲ್ಲಿ ಕಾರಣಗಳೇನು ; (ಮಾಹಿತಿ ನೀಡುವುದು)

(ಈ) ಸದರಿ ಬಸ್‌ನಿಲ್ದಾಣದ ನಿರ್ಮಾಣಕ್ಕೆ ಚಾಲನೆ ದೊರಕುವುದು ಯಾವಾಗ ? (ನಿರ್ದಿಷ್ಟ ದಿನಾಂಕ ತಿಳಿಸುವುದು)

## ''ಬಿದಾಯಿ ಯೋಜನೆ''

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬ (೮೨೯) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಅಲ್ಪ ಸಂಖ್ಯಾತ ಹೆಣ್ಣು ಮಕ್ಕಳ ವಿವಾಹಕ್ಕೆ ಸಹಾಯಾನುದಾನ ನೀಡುವ ''ಬಿದಾಯಿ ಯೋಜನೆಗೆ'' ಕಳೆದ ಎರಡು ವರ್ಷಗಳಲ್ಲಿ ಬಂದ ಅರ್ಜಿಗಳೆಷ್ಟು; (ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು)

(ಆ) ಅಲ್ಪ ಸಂಖ್ಯಾತರ ಮದುವೆ ಖರ್ಚು ನಿಭಾಯಿಸಲು ಕಳೆದ ಎರಡು ವರ್ಷಗಳಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು ; ಎಷ್ಟು ಕುಟುಂಬಗಳಿಗೆ ಬಿಡುಗಡೆ ಮಾಡಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಅಲ್ಪ ಸಂಖ್ಯಾತ ಹೆಣ್ಣು ಮಕ್ಕಳ ಮದುವೆಗೆ ಆಯ–ವ್ಯಯದಲ್ಲಿ ಮೀಸಲಿಟ್ಟಿರುವ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಅನುದಾನ ಬಿಡುಗಡೆ ಮಾಡುಲು ಇರುವ ಮಾನದಂಡಗಳೇನು ? (ವಿವರ ನೀಡುವುದು)

## ಕೊಪ್ಪಳ ಜಿಲ್ಲೆಗೆ ನೂತನವಾಗಿ ಜೆಸ್ಕಾಂ ವೃತ್ತ ಕಛೇರಿ ಮಂಜೂರಾತಿ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೭ (೯೨೧) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಪ್ಪಳ ಜಿಲ್ಲೆಗೆ ನೂತನವಾಗಿ ಜೆಸ್ಕಾಂ ವೃತ್ತ (ಎಸ್.ಇ.) ಕಛೇರಿ ಮಂಜೂರು ಮಾಡಲಾಗಿದೆಯೇ ;

(ಆ) ಮಾಡಿದ್ದಲ್ಲಿ, ವೃತ್ತ ಕಛೇರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದೆಯೇ;

(ಇ) ಕಛೇರಿಯನ್ನು ಪ್ರಾರಂಭಿಸಿದ್ದಲ್ಲಿ ಜಿಲ್ಲೆಯ ಯಾವ ಭಾಗದಲ್ಲಿ ಕಛೇರಿಯನ್ನು ಪ್ರಾರಂಭಿಸಲಾಗಿದೆ ;

(ಈ) ಜಿಲ್ಲಾ ಕೇಂದ್ರ ಸ್ಥಾನದಲ್ಲಿರಬೇಕಾದ ಅಧೀಕ್ಷಕ ಇಂಜಿನಿಯರ್ ಕಛೇರಿಯನ್ನು ಮುನಿರಾಬಾದ್ ಗ್ರಾಮದಲ್ಲಿ ಸ್ಥಾಪಿಸಿದ ಕ್ರಮ ಎಷ್ಟು ಸರಿ ; ಇದಕ್ಕೆ ಇರುವ ಕಾರಣಗಳೇನು ; ಇದರಿಂದಾಗುವ ಆಡಳಿತಾತ್ಮಕ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಕೊಪ್ಪಳ ಜಿಲ್ಲೆ ಕೇಂದ್ರಸ್ಥಾನದಲ್ಲಿ ಕಛೇರಿಯನ್ನು ಪ್ರಾರಂಭಿಸಲು ಸ್ಥಳಾವಕಾಶದ ಇರುವ ಕೊರತೆಯೇನಾದರೂ ಇದೆಯೇ ; ಅಥವಾ ಇಲಾಖೆಯಲ್ಲಿ ಅನುದಾನದ ಕೊರತೆಯೇನಾದರೂ ಇದೆಯೇ ;

(ಊ) ಕೂಡಲೇ ವೃತ್ತ ಕಛೇರಿಯನ್ನು ಕೊಪ್ಪಳ ನಗರದಲ್ಲಿ ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಬಳ್ಳಾರಿಯಲ್ಲಿ ಕೃಷಿ ಇಲಾಖೆಯ ಕಟ್ಟಡ ಹಾಳಾಗುತ್ತಿರುವ ಬಗ್ಗೆ

**ಶ್ರೀ ಮೃತ್ಯುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೯೮ (೮೯೯) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬಳ್ಳಾರಿ ನಗರದಲ್ಲಿ ಕೃಷಿ ಇಲಾಖೆಯ ''ಕರ್ನಾಟಕ ಆಗ್ರೋ ಇಂಡಸ್ಟ್ರೀಸ್'' ಕಛೇರಿಯು ಎಲ್ಲಿ ಕಾರ್ಯನಿರ್ವಹಿಸುತ್ತಿದೆ : (ಇದರ ವಿಳಾಸ ನೀಡುವುದು)

(ಆ) ಸದರಿ ಕಛೇರಿಗೆ ಸ್ವಂತ ಕಟ್ಟಡ ಏನಾದರೂ ನಿರ್ಮಿಸಲಾಗಿದೆಯೇ ; ಹಾಗಿದ್ದಲ್ಲಿ, ಎಲ್ಲಿ, ಯಾವಾಗ ನಿರ್ಮಿಸಲಾಗಿದೆ ; ಅದಕ್ಕೆ ತಗಲಿದೆ ವೆಚ್ಚವೆಷ್ಟು ; (ವಿಳಾಸದೊಂದಿಗೆ ವಿವರ ನೀಡುವುದು)

(ಇ) ಈ ಕಛೇರಿಯ ಕಟ್ಟಡ ಹಾಳಾಗುತ್ತಿದ್ದು ''ಕರ್ನಾಟಕ ಆಗ್ರೋ ಇಂಡಸ್ಟ್ರೀಸ್ ಕಾರ್ಪೊರೇಶನ್ ಲಿಮಿಟೆಡ್'' ಈ ಕಟ್ಟಡದಲ್ಲಿ ಕಾರ್ಯನಿರ್ವಹಿಸಲು ಅನುಕೂಲವಾಗುವಂತೆ ಸರ್ಕಾರ ಶೀಘ್ರವಾಗಿ ಕ್ರಮ ಕೈಗೊಳ್ಳುವುದೇ ?

## ನಗರೋತ್ಥಾನದ ಎರಡನೇ ಹಂತದ ಯೋಜನೆಯ ಕಾಮಗಾರಿ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೯೯ (೮೨೭) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗದಗ ಜಿಲ್ಲೆಯ ಗದಗ, ಮುಂಡರಗಿ, ಶಿರಹಟ್ಟಿ ರೋಣ, ನರಗುಂದ ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತ್‍ಗಳಿಗೆ ಎರಡನೇ ಹಂತದ ನಗರೋತ್ಥಾನ ಯೋಜನೆ ಜಾರಿಯಾಗಿದೆಯೇ ;

(ಆ) ಜಾರಿಯಾಗಿದ್ದಲ್ಲಿ, ಯಾವ ವರ್ಷದಿಂದ ಜಾರಿಯಾಗಿದೆ ; ಎಷ್ಟು ಹಣ ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ ;

(ಇ) ನಗರೋತ್ಥಾನ ಎರಡನೆ ಹಂತದ ಯೋಜನೆಯಡಿ ಗದಗ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ಎಷ್ಟು ಹಣ ಮತ್ತು ಯಾವಾಗ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ಈ ಕಾಮಗಾರಿಗಳನ್ನು ಕಾರ್ಯಗತಗೊಳಿಸಲು ಯಾವ ಗುತ್ತಿಗೆದಾರರಿಗೆ ಮತ್ತು ಯಾವ ಎಸ್.ಆರ್. ದರದಲ್ಲಿ ನೀಡಲಾಗಿದೆ ;

(ಉ) ನಗರೋತ್ಥಾನ ಎರಡನೆಯ ಹಂತದ ಯೋಜನೆ ಅಡಿ ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಕಾಮಗಾರಿಗಳು ನಡೆದಿವೆಯೇ ; ಪ್ರಸ್ತುತ ಕಾಮಗಾರಿಗಳು ಯಾವ ಹಂತದಲ್ಲಿವೆ ; ಮುಕ್ತಾಯಗೊಳ್ಳುವುದು ಯಾವಾಗ? (ವಿವರ ನೀಡುವುದು)

## ಲೋಕೋಪಯೋಗಿ ವ್ಯಾಪ್ತಿಯ ರಸ್ತೆಗಳನ್ನು ಕಾಂಕ್ರಿಟೀಕರಣಗೊಳಿಸುವುದು

**ಶ್ರೀ ಸಿ.ಹೆಚ್. ವಿಜಯಶಂಕರ (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೦ (೭೦) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಗೆ ಬರುವ ರಸ್ತೆಗಳನ್ನು ದುರಸ್ಥಿಗೊಳಿಸುವ ಸಂದರ್ಭದಲ್ಲಿ ಡಾಂಬರೀಕರಣದ ಮೂಲಕ ದುರಸ್ತಿಗೊಳುಸುವ ಪದ್ಧತಿಯ ಬದಲಾಗಿ ಸದರಿ ರಸ್ತೆಗಳನ್ನು ಕಾಂಕ್ರಿಟ್ ರಸ್ತೆಯನ್ನಾಗಿ ಪರಿವರ್ತಿಸಬೇಕಾದಲ್ಲಿ ಪ್ರತಿ ಕಿ.ಮೀ.ಗೆ ತಗಲುವ ವೆಚ್ಚದಲ್ಲಿ ಆಗಬಹುದಾದ ವ್ಯತ್ಯಾಸಗಳೇನು ;

(ಆ) ಕೇಂದ್ರ ಸರ್ಕಾರ ಮುಂದಿನ ದಿನಗಳಲ್ಲಿ ತನ್ನ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿಗಳನ್ನು ಡಾಂಬರೀಕರಣದ ಬದಲಾಗಿ ಕಾಂಕ್ರಿಟೀಕರಣದ ಮೂಲಕ ರಸ್ತೆಯ ಅಭಿವೃದ್ಧಿ ಹಾಗೂ ದುರಸ್ಥಿ ಅದಲ್ಲದೇ ಉನ್ನತೀಕರಣಗೊಳಿಸಲು ಯೋಜನೆ ರೂಪಿಸುತ್ತಿರುವುದು ನಿಜವೇ ;

(ಇ) ಡಾಂಬರೀಕರಣದ ಬದಲಾಗಿ ಕಾಂಕ್ರಿಟ್ ರಸ್ತೆಯನ್ನು ನಿರ್ಮಿಸಿದಲ್ಲಿ ರಸ್ತೆಯ ಗುಣಮಟ್ಟ ನಿರೀಕ್ಷೆಗೂ ಮೀರಿ ಹೆಚ್ಚಾಗುವುದಲ್ಲದೇ, ಸದರಿ ರಸ್ತೆಯು ೫೦ ವರ್ಷಗಳಿಗೂ ಹೆಚ್ಚಾಗಿ ಸುಸ್ಥಿತಿಯಲ್ಲಿರುತ್ತದೆ ಎಂಬುದನ್ನು ಸರ್ಕಾರ ಒಪ್ಪುತ್ತದೆಯೇ ;

(ಈ) ರಾಜ್ಯದ ಘಟ್ಟಸಾಲು, ಮಲೆನಾಡು ಪ್ರದೇಶ ಹಾಗೂ ಅತಿ ಹೆಚ್ಚಾಗಿ ಮಳೆ ಬೀಳುವ ಪ್ರದೇಶಗಳಲ್ಲಿ ತಾಂತ್ರಿಕವಾಗಿ ಡಾಂಬರೀಕರಣದ ರಸ್ತೆಗಳು ಉಪಯುಕ್ತವಲ್ಲ ಹಾಗೂ ಬಹುಕಾಲ ಬಾಳಿಕೆ ಬರುವುದಿಲ್ಲ ಎಂಬ ವಿಚಾರಕ್ಕನುಗುಣವಾಗಿ ಪ್ರಾರಂಭಿಕ ಹಂತದಲ್ಲಾದರೂ ಈ ಭಾಗಗಳಲ್ಲಿ ಪ್ರಾಯೋಗಿಕವಾಗಿ ತನ್ನ ವ್ಯಾಪ್ತಿಯ ರಸ್ತೆಗಳನ್ನು ಕಾಂಕ್ರಿಟ್ ರಸ್ತೆಗಳನ್ನಾಗಿ ನಿರ್ಮಿಸುವ ಬಗ್ಗೆ ಇಲಾಖೆ ಚಿಂತಿಸುತ್ತಿದೆಯೇ ; ಹಾಗಿದ್ದಲ್ಲಿ, ವಿವರಗಳನ್ನು ಒದಗಿಸುವುದು ?

## ರಾಯಚೂರು ಜಿಲ್ಲೆಯ ವಿವಿಧ ಕೃಷಿ ಮಾರುಕಟ್ಟೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೦೧ (೮೫೭) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಕೃಷಿ ಮಾರುಕಟ್ಟೆಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರಗಳನ್ನು ನೀಡುವುದು) ;

(ಆ) ವಿವಿಧ ಕೃಷಿ ಮಾರುಕಟ್ಟೆಗಳಿಗೆ ರೈತರಿಂದ ವಸೂಲಾಗುತ್ತಿರುವ ಮಾರುಕಟ್ಟೆ ಶುಲ್ಕ ಎಷ್ಟು ;

(ಇ) ೨೦೧೪–೧೫ರಲ್ಲಿ ರಾಯಚೂರು ಜಿಲ್ಲೆಯ ನಬಾರ್ಡ್ ಯೋಜನೆಯ ಅಡಿಯಲ್ಲಿ ಜಿಲ್ಲೆಯ ವಿವಿಧ ಮಾರುಕಟ್ಟೆಗಳಿಗೆ ಮಂಜೂರಾಗಿರುವ ಅನುದಾನವೆಷ್ಟು ?

## ಲೋಕೋಪಯೋಗಿ ಇಲಾಖೆಯ ಸಿ.ಆರ್.ಎಫ್. ಅಡಿಯಲ್ಲಿ ಕೈಗೊಂಡ ಕಾಮಗಾರಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೦೨ (೮೫೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಕಳೆದ ೦೩ ವರ್ಷಗಳಲ್ಲಿ ಸಿ.ಆರ್.ಎಫ್. ಅಡಿಯಲ್ಲಿ ರಾಜ್ಯದಲ್ಲಿ ಎಷ್ಟು ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಪ್ರತಿ ಕಾಮಗಾರಿಯ ಟೆಂಡರ್ ಪ್ರಕ್ರಿಯೆ, ಕಾಮಗಾರಿಯ ಸ್ಥಿತಿಗತಿ, ಕಾಮಗಾರಿಯ ಅಂದಾಜು ಮೊತ್ತ ಕುರಿತು ಸಂಪೂರ್ಣ ವಿವರ ನೀಡುವುದು)

(ಆ) ಸಿ.ಆರ್.ಎಫ್. ಅಡಿಯಲ್ಲಿ ಕೇಂದ್ರ ಸರ್ಕಾರ ಕಳೆದ ೦೩ ವರ್ಷಗಳಲ್ಲಿ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಇ) ಕಳೆದ ೦೩ ವರ್ಷಗಳಲ್ಲಿ ಕೈಗೊಂಡ ಕಾಮಗಾರಿಗಳಿಗೆ ಗುತ್ತಿಗೆದಾರರಿಗೆ ಪಾವತಿ ಮಾಡಿರುವ ಹಣವೆಷ್ಟು ; ಬಾಕಿ ಹಣ ಎಷ್ಟು ; ಗುತ್ತಿಗೆದಾರರಿಗೆ ಹಣ ಬಿಡುಗಡೆಯಾಗದೇ ಇರಲು ಕಾರಣ ಏನು ;

(ಈ) ಸಿ.ಆರ್.ಎಫ್. ಅಡಿ ಕಾಮಗಾರಿಗಳಿಗೆ ಹಣಕಾಸು ಇಲಾಖೆಯ ಅನುಮೋದನೆ ಪಡೆಯದೇ ಇರುವುದು ನಿಜವೇ ; ಇದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಆ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ?

## ಶೆಟ್ಟಿಗೊಂಡನಹಳ್ಳಿ ಉಪಸ್ಥಾವರ ನಿರ್ಮಾಣದ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೧೦೩ (೮೯೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತುರುವೇಕೆರೆ ತಾಲ್ಲೂಕು ಮಾಯಸಂದ್ರ ಹೋಬಳಿ ಶೆಟ್ಟಿಗೊಂಡನಹಳ್ಳಿ ಉಪಸ್ಥಾವರ ಮಾಡಲು ಎಷ್ಟು ವರ್ಷಗಳಿಂದ ಬೇಡಿಕೆ ಬಂದಿದೆ ;

(ಆ) ಹಲವಾರು ವರ್ಷಗಳಿಂದ ಈ ಭಾಗದ ರೈತರು ಹತ್ತಾರೂ ಭಾರಿ ಬೇಡಿಕೆ ಇಟ್ಟಿದ್ದು, ತುಂಬಾ ಸಂಕಷ್ಟಕ್ಕೆ ಈಡಾಗಿ ಅನೇಕ ಪ್ರತಿಭಟನೆ ಮಾಡುತ್ತಿರುವುದು ತಿಳಿದಿದೆಯೇ ;

(ಇ) ಮುಖ್ಯಮಂತ್ರಿಗಳು, ಮಂತ್ರಿಗಳು ಸಹ ಮಂಜೂರು ಮಾಡಲು ಪತ್ರ ಕೊಟ್ಟಿದ್ದು ಇದುವರೆಗೆ ಪ್ರಾರಂಭ ಮಾಡದಿರಲು ಕಾರಣವೇನು ;

(ಈ) ರೈತರ ಸಂಕಷ್ಟ ಗಮನದಲ್ಲಿಟ್ಟಿಕೊಂಡು ಕೂಡಲೇ ಶೆಟ್ಟಿಗೊಂಡನಹಳ್ಳಿ ಉಪಸ್ಥಾವರ ಮಂಜೂರು ಮಾಡಲಾಗುವುದೇ ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಮಾಡಲಾಗುವುದು ?

## ಬೀದರ್ ಜಿಲ್ಲೆಯ ರಸ್ತೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೦೪ (೮೨೫) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರ ಈ ಸಾಲಿಗೆ ನಿಗದಿಪಡಿಸಿದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ವೆಚ್ಚವಾಗಿರುವ ಅನುದಾನವೆಷ್ಟು ; ಕೈಗೊಂಡ ಕಾಮಗಾರಿಗಳು ಎಷ್ಟು ; (ತಾಲ್ಲೂಕುವಾರು ಕಾಮಗಾರಿವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಪೂರ್ಣಗೊಂಡಿರುವ ಮತ್ತು ಅಪೂರ್ಣಗೊಂಡಿರುವ ಕಾಮಗಾರಿಗಳು ಎಷ್ಟು ; (ವಿವರ ನೀಡುವುದು)

(ಇ) ಕೆಲವು ಕಾಮಗಾರಿಗಳ ಅನುಷ್ಠಾನದಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಾರಣಗಳೇನು ;

(ಈ) ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?

## ಮಾರ್ಗದಾಳು ನೇಮಕಾತಿಯಲ್ಲಿ ಮಹಿಳಾ ಮೀಸಲು

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೧೦೫ (೮೧೬) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇಂಧನ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಉದ್ಯಮಗಳ ನೇಮಕಾತಿಯಲ್ಲಿ ಮಾರ್ಗದಾಳು ಒಳಗೊಂಡಂತೆ ವಿವಿಧ ದರ್ಜೆಯ ಉದ್ಯೋಗಿಗಳಿಗೆ ನೇಮಕ ಮಾಡುವಾಗ, ಸರ್ಕಾರದ ನೀತಿಯಂತೆ ಶೇ.೩೦ರ ಮಹಿಳಾ ಮೀಸಲಾತಿಯನ್ನು ಪಾಲಿಸಲಾಗುತ್ತಿದೆಯೇ ;

(ಆ) ಪಾಲಿಸಲಾಗದಿದ್ದಲ್ಲಿ, ಸಕಾರಣಗಳನ್ನು ನೀಡುವುದು ;

(ಇ) ಮಾರ್ಗದಾಳು ಉದ್ಯೋಗಿಗಳ ನೇಮಕಾತಿಯಲ್ಲಿ ಪುರಷರನ್ನು ಮಾತ್ರ ನೇಮಕ ಮಾಡಬೇಕೆಂದು ನೀತಿ ಮಾಡಿಕಕೊಳ್ಳಲಾಗಿದೆಯೇ ? (ವಿವರಗಳನ್ನು ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500